(2)

43 + 1

<u>ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಎಸ್.ವ್ಹಿ. ಸಂಕನೂರ ಮತ್ತು ಪುಟ್ಟಣ್ಣ ಇವರು ನಿಯಮ 330ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ</u>

**ವಿಷಯ:-**

**ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ.ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ತೆರೆವಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಉಚ್ಛನ್ಯಾಯಾಲಯವು ತೀರ್ಪು ನೀಡಿದರೂ ಸಹ ಸರ್ಕಾರ ಅನುಮತಿಸದಿರುವುದರಿಂದ ಉಂಟಾಗಿರುವ ದುಷ್ಪರಿಣಾಮಗಳ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ರಾಜ್ಯದ ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015 ಪೂರ್ವದಲ್ಲಿ ನಿಧನ ನಿವೃತ್ತಿ ಮತ್ತು ಇತರೆ ಕಾರಣಗಳಿಂದ ತೆರೆವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಅದರನ್ವಯ ಭರ್ತಿ ಮಾಡಲಾದ ಬೋಧಕ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಕ್ರಮವಹಿಸಲಾಗುತ್ತಿದೆ.

ದಿನಾಂಕ: 01-01-2016 ರ ನಂತರ ಖಾಸಗಿ ಅನುದಾನಿತ ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿಧನ ನಿವೃತ್ತಿ ಮತ್ತು ಇತರೆ ಕಾರಣಗಳಿಂದ ತೆರವಾದ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಕರ್ನಾಟಕ ರಾಜ್ಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಒಕ್ಕೂಟ(ರಿ) ತುಮಕೂರು ಜಿಲ್ಲೆ ಇವರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ :11667/2022 ರಲ್ಲಿ ದಾವೆ ಹೂಡಿದ್ದು, ಈ ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ: 08-12-2023 ರಂದು ತೀರ್ಪು ನೀಡಿರುತ್ತದೆ. ಸದರಿ ತೀರ್ಪನ್ನು ಪ್ರಶ್ನಿಸಿ ರಿಟ್ ಅಪೀಲ್ ಸಂಖ್ಯೆ:361/2024 ನ್ನು ದಾಖಲಿಸಲಾಗಿದೆ.

ಭಾರತೀಯ ಸಂವಿಧಾನದ 41ನೇ ಅನುಚ್ಛೇದದಲ್ಲಿ ಹೀಗೆ ಹೇಳಲಾಗಿದೆ "ರಾಜ್ಯವು ಅದರ ಆರ್ಥಿಕ ಸಾಮರ್ಥ್ಯದ ಮಿತಿಯೊಳಗೆ" ಕೆಲಸ, ಶಿಕ್ಷಣ ಮತ್ತು ಸಾರ್ವಜನಿಕ ಸಹಾಯದ ಹಕ್ಕನ್ನು ಭದ್ರಪಡಿಸಿಕೊಳ್ಳಲು ಪರಿಣಾಮಕಾರಿ ನಿಬಂಧನೆಗಳನ್ನು ಮಾಡಬೇಕೆಂದು ಆದೇಶಿಸುತ್ತದೆ. ಅದರಂತೆ, ಕರ್ನಾಟಕ ಶಿಕ್ಷಣ ಕಾಯ್ದೆ 49ರಲ್ಲಿ ರಾಜ್ಯ ಸರ್ಕಾರವು ತನ್ನ ಆರ್ಥಿಕ ಸಾಮರ್ಥ್ಯದ ಮಿತಿಯೊಳಗೆ ಮತ್ತು ರಾಜ್ಯದ ಆರ್ಥಿಕ ಸಾಮರ್ಥ್ಯವನ್ನು ಗಮನದಲ್ಲಿಟ್ಟುಕೊಂಡು ಮಾನ್ಯತೆ ಪಡೆದ ಸಂಸ್ಥೆಗಳಿಗೆ ಅನುದಾನ-ಸಹಾಯ ನೀಡಲು ಮೊತ್ತವನ್ನು ನಿಗದಿಪಡಿಸುತ್ತದೆ ಎಂದು ಸ್ಪಷ್ಟವಾಗಿ ಹೇಳುತ್ತದೆ.

ಮುಂದುವರೆದು, ರಾಮಾಂಜನೇಯ ಸ್ವಾಮಿ ವಿದ್ಯಾ ಸಂಸ್ಥೆ v/s ಸ್ಟೇಟ್ ಆಫ್ ಕರ್ನಾಟಕ ILR 2000(1) KAR 922ದ ಈ ತೀರ್ಪಿನಲ್ಲಿ ಕರ್ನಾಟಕದ ಗೌರವಾನ್ವಿತ ಉಚ್ಚ ನ್ಯಾಯಾಲಯವು ಈ ರೀತಿ ಹೇಳುತ್ತದೆ "ಖಾಸಗಿ ಶಿಕ್ಷಣ ಸಂಸ್ಥೆಗಳು ಅನುದಾನವನ್ನು ಪಡೆಯಲು ಯಾವುದೇ ಮೂಲಭೂತ ಅಥವಾ ಇತರೆ ಕಾನೂನುಬದ್ಧವಾಗಿ ಜಾರಿಗೊಳಿಸಬಹುದಾದ ಹಕ್ಕನ್ನು ಹೊಂದಿಲ್ಲ" ಎಂದು ತೀರ್ಪು ನೀಡಿರುತ್ತದೆ.

ಮಾನ್ಯ ಉಚ್ಚ ನ್ಯಾಯಲಯವು ರಿಟ್ ಅರ್ಜಿ ಸಂಖ್ಯೆ: 11667/2022ರ ದಿನಾಂಕ: 08-12-2023ರ ತೀರ್ಪಿನಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ತೀರ್ಪು ನೀಡಿರುತ್ತದೆ. ಆದರೆ ಕರ್ನಾಟಕ ಶಿಕ್ಷಣ ಕಾಯ್ದೆ ಕಲಂ 53ರನ್ವಯ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸುವುದು ಅಥವಾ ಒಳಪಡಿಸದಿರುವುದು ಸರ್ಕಾರದ ಆರ್ಥಿಕ ಪರಿಮಿತಿಗೊಳಪಡುವ ನೀತಿಯ ವಿಷಯವಾಗಿದೆ.

ರಿಟ್ ಅರ್ಜಿ ಸಂಖ್ಯೆ 11667/2022 ದಿನಾಂಕ: 08-12-2023 ರ ತೀರ್ಪಿನ ವಿರುದ್ಧ ರಿಟ್ ಅಪೀಲು ಸಂಖ್ಯೆ:361/2024ನ್ನು ದಾಖಲಿಸಿದ್ದು, ಪ್ರಕರಣವು ವಿಚಾರಣಾ ಹಂತದಲ್ಲಿರುತ್ತದೆ.

**ಸಂಖ್ಯೆ: ಇಪಿ 225 ಎಸ್‌ಇಎಸ್ 2024**

**(ಎಸ್. ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**